ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ,ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012

ಇ-ಮೇಲ್:commissioner.pue@gmail.com ಸ್ಥಿರ ದೂರವಾಣಿ ಸಂ:080-23562033

---

ಸಂಖ್ಯೆ: DPUE-ACA0OTH/37/2022-ACADEMIC-DEPARTMENT OF PRE UNIVERSITY EDUCATION

ದಿನಾಂಕ: 21-06-2022

## <u>ಸುತ್ತೋಲೆ.</u>

ವಿಷಯ: ದ್ವಿತೀಯ ಪಿಯುಸಿ ತರಗತಿಗಳಿಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಪದವಿ ಪೂರ್ವ ಉಪನ್ಯಾಸಕರ ಸಂಘ(ರಿ), ಬೆಂಗಳೂರು ಇವರ ಮನವಿ ಪತ್ರ ದಿನಾಂಕ:17.06.2022

* * * *

2022-23ನೇ ಶೈಕ್ಷಣಿಕ ಸಾಲಿಗೆ ದ್ವಿತೀಯ ಪಿಯುಸಿಗೆ ಸಂಬಂಧಿಸಿದಂತೆ ದಾಖಲಾತಿ ದಿನಾಂಕವನ್ನು ದಂಡ ಶುಲ್ಕವಿಲ್ಲದೆ ದಿನಾಂಕ:15.06.2022ರವರೆಗೆ ಹಾಗೂ ದಂಡ ಶುಲ್ಕದೊಂದಿಗೆ 30.06.2022ರವರೆಗೆ ನಿಗದಿಪಡಿಸಲಾಗಿತ್ತು.

ಆದರೆ ಕರ್ನಾಟಕ ರಾಜ್ಯ ಪದವಿ ಪೂರ್ವ ಉಪನ್ಯಾಸಕರ ಸಂಘ(ರಿ), ಬೆಂಗಳೂರು ಇವರು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ದಂಡರಹಿತ ದಾಖಲಾತಿ ದಿನಾಂಕವನ್ನು ವಿಸ್ತರಿಸುವಂತೆ ಉಲ್ಲೇಖ-1ರ ಪತ್ರದಲ್ಲಿ ಕೋರಿರುತ್ತಾರೆ. ಸದರಿಯವರ ಮನವಿಯನ್ನು ಪರಿಶೀಲಿಸಲಾಗಿ, ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ದಿನಾಂಕ:22.06.2022ರವರೆಗೆ ದಂಡಶುಲ್ಕ ರಹಿತವಾಗಿ ದಾಖಲಾತಿ ದಿನಾಂಕವನ್ನು ವಿಸ್ತರಿಸಿ ಆದೇಶಿಸಿದೆ.

**ವಿ.ಸೂ. ಮತ್ತೊಮ್ಮೆ ದ್ವಿತೀಯ ಪಿಯುಸಿ ದಾಖಲಾತಿ ದಿನಾಂಕವನ್ನು ಯಾವುದೇ ಕಾರಣಕ್ಕೂ <u>ವಿಸ್ತರಿಸಲಾಗುವುದಿಲ್ಲ.</u>**

| ದಂಡ ಶುಲ್ಕವಿಲ್ಲದೆ ದಾಖಲಾತಿಗೆ, ವಿಸ್ತರಿಸಿದ ಕೊನೆಯ ದಿನಾಂಕ. | ವಿಳಂಬ ದಾಖಲಾತಿ ರೂ.670/- (ಆರುನೂರ ಎಪ್ಪತ್ತು) ದಂಡ ಶುಲ್ಕದೊಂದಿಗೆ ವಿಸ್ತರಿದ ಕೊನೆಯ ದಿನಾಂಕ. | ವಿಶೇಷ ದಂಡ ಶುಲ್ಕ ರೂ.2890/-ರೊಂದಿಗೆ ದಾಖಲಾತಿಗೆ ವಿಸ್ತರಿಸಿದ ಕೊನೆಯ ದಿನಾಂಕ. |
|---|---|---|
| **22.06.2022** | **30.06.2022** | **08.07.2022** |

2022-23ರ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ದಾಖಲಾತಿ ಶುಲ್ಕಗಳನ್ನು

I/273437/2022

ಸಂಗ್ರಹಿಸುವುದು. ಈ ರೀತಿ ಸಂಗ್ರಹಿಸಿದ ಶುಲ್ಕಗಳನ್ನು ಸರ್ಕಾರ /ಇಲಾಖೆಗೆ ದಾಖಲಾತಿ ದಿನಾಂಕ ಮುಗಿದ ಮಾರನೇ ಕಾರ್ಯನಿರತ ದಿನಾಂಕದಂದು (ದಂಡ ಶುಲ್ಕ ಹಾಗೂ ವಿಶೇಷ ದಂಡ ಶುಲ್ಕ) ಖಜಾನೆಗೆ ಶುಲ್ಕಗಳನ್ನು ಕಡ್ಡಾಯವಾಗಿ ಜಮಾ ಮಾಡುವುದು. ಈ ಸಂಬಂಧ ಪ್ರಾಂಶುಪಾಲರು ಮತ್ತು ಆಡಳಿತ ಮಂಡಳಿಯವರು ಪೂರ್ಣ ಜವಾಬ್ದಾರರಾಗಿರುತ್ತಾರೆ.

director.pue, DIR(DPUE), O/o

COMMISSIONER-DPUE

**Signed by Director.pue**
**Date: 21-06-2022 13:30:19**

ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ- ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರ ಇ-ಮೇಲ್ ವಿಳಾಸಕ್ಕೆ ಕಳುಹಿಸಲು ಹಾಗೂ ಇಲಾಖಾ ಜಾಲತಾಣದಲ್ಲಿ ಅಳವಡಿಸಲು.

**ಮಾಹಿತಿಗಾಗಿ:**

3.ಆಪ್ತ ಕಾರ್ಯದರ್ಶಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು ಬೆಂಗಳೂರು.

4. ಆಪ್ತ ಕಾರ್ಯದರ್ಶಿಗಳು, ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬೆಂಗಳೂರು.

5.ಕಛೇರಿ /ಹೆಚ್ಚುವರಿ.